ಯೋಜನೆ ಅನುಷ್ಠಾನಗೊಳಿಸಲು ಸರ್ಕಾರ ಹಣ ನಿಗದಿ ಪಡಿಸಲು ಅವಕಾಶ ಕಲ್ಪಿಸಿಕೊಡಲು ಸರ್ಕಾರಕ್ಕಿರುವ ತೊಂದರೆ ಏನು;

ಈ) ಈ ಕಾರ್ಯಕ್ರಮದ ಅನುಷ್ಠಾನದಲ್ಲಿ ವೈಯಕ್ತಿಕ ಕೊಳವೆ ಬಾವಿ ಪಡೆಯುವ ಫಲಾನುಭವಿಗೆ ಕೊಳವೆಬಾವಿ ಕೊರೆಸುವ ಅವಕಾಶ ಸರ್ಕಾರದಲ್ಲಿ ಇದೆಯೇ?

ಶ್ರೀ ಡಿ.ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಕೆಲವು ಕಡೆ ಸಾಧ್ಯವಾಗುತ್ತಿಲ್ಲ.

ಇ) ಘಟಕ ವೆಚ್ಚದ ಮಿತಿಯನ್ನು ತೆಗೆದು ಹಾಕಲಾಗಿದೆ. ಅಂತರ್ಜಲ ಲಭ್ಯತೆ ಆಧಾರದ ಮೇಲೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ವೈಜ್ಞಾನಿಕವಾಗಿ ವಿಂಗಡಿಸಿದ ವಲಯಗಳಿಗನುಸಾರವಾಗಿ, ಘಟಕ ವೆಚ್ಚ ಹೆಚ್ಚಿಸುವ ವಿಷಯ ಪರಿಶೀಲನೆಯಲ್ಲಿದೆ.

ಈ) ಇಲ್ಲ.

ಕ್ಯಾನ್ಸರ್, ಹೃದಯರೋಗ, ಬ್ರೈನ್‌ಟ್ಯೂಮರ್ ಮತ್ತು ಸುಟ್ಟ ಗಾಯಗಳ ರೋಗಿಗಳಿಗೆ ಉಚಿತ ಚಿಕಿತ್ಸೆ ಕಲ್ಪಿಸುವುದು.

899 (817) ಶ್ರೀ ನರಸಿಂಹಸ್ವಾಮಿ ಜಿ. (ದೊಡ್ಡಬಳ್ಳಾಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರದ ವತಿಯಿಂದ ಬಡತನ ರೇಖೆಗಿಂತ ಕೆಳಗಿರುವ ಕೂಲಿ ಕಾರ್ಮಿಕರು ಹಾಗೂ ಬಡವರಿಗೆ ಸರ್ಕಾರದ ವತಿಯಿಂದ ಕ್ಯಾನ್ಸರ್, ಬ್ರೈನ್‌ಟ್ಯೂಮರ್, ಮೂತ್ರಪಿಂಡ ವೈಫಲ್ಯ ಹಾಗೂ ಸುಟ್ಟಗಾಯಗಳ ರೋಗಿಗಳಿಗೆ ಸಂಪೂರ್ಣ ಉಚಿತವಾಗಿ ಚಿಕಿತ್ಸೆ ನೀಡುವ ಯೋಜನೆ ಸರ್ಕಾರದ ಮುಂದೆ ಇದೆಯೇ?

ಆ) ಇದ್ದಲ್ಲಿ ಅನುಷ್ಠಾನಗೊಳಿಸಲು ಇರುವ ತೊಂದರೆಗಳೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಗುಲ್ಬರ್ಗಾ ಕಂದಾಯ ವಿಭಾಗದ ಬೀದರ್, ಗುಲ್ಬರ್ಗಾ, ರಾಯಚೂರು, ಕೊಪ್ಪಳ, ಯಾದಗೀರ್, ಬಳ್ಳಾರಿ ಈ 6 ಜಿಲ್ಲೆಗಳಲ್ಲಿ ಬಡತನ

ರೇಖೆಗಿಂತ ಕೆಳಗಿರುವ ಕುಟುಂಬದವರಿಗೆ ಕ್ಯಾನ್ಸರ್, ಕಿಡ್ನಿ, ಹೃದಯ, ಬ್ರೈನ್‌ಟ್ಯೂಮರ್ ಸುಟ್ಟ ಗಾಯಗಳು ಮುಂತಾದ ಕಾಯಿಲೆಗಳ ಚಿಕಿತ್ಸೆಗಾಗಿ "ವಾಜಪೇಯಿ ಆರೋಗ್ಯಶ್ರೀ" ಎಂಬ ಯೋಜನೆಯನ್ನು ಜಾರಿಗೊಳಿಸ ಲಾಗುತ್ತಿದ್ದು, ಅದರಡಿ ಪ್ರತಿ ಕುಟುಂಬಕ್ಕೆ ಫ್ಯಾಮಿಲಿ ಫ್ಲೋಟರ್ ಅಧಾರದ ಮೇಲೆ ರೂ.1.50 ಲಕ್ಷಗಳಿಂದ ರೂ.2.00 ಲಕ್ಷಗಳವರೆಗೆ ಗುರುತಿಸಲ್ಪಟ್ಟ ಸರ್ಕಾರಿ/ಖಾಸಗಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸಾ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಆ) "ವಾಜಪೇಯಿ ಆರೋಗ್ಯಶ್ರೀ" ಎಂಬ ಯೋಜನೆಯನ್ನು ಜಾರಿಗೊಳಿಸಲಾಗುತ್ತಿರುವ ಕಾರಣ ಇದು ಉದ್ಭವಿಸುವುದಿಲ್ಲ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನಾಂಗದವರಿಗೆ ವಸತಿ ಶಾಲೆಗಳನ್ನು ಪ್ರಾರಂಭಿಸುವುದು.

900 (1133) ಶ್ರೀ ನರೇಂದ್ರ ಆರ್. (ಹನೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿಯೇ ಅತಿ ಹೆಚ್ಚು ಗಿರಿಜನರು (ಸೋಲಿಗರು) ಕೊಳ್ಳೆಗಾಲ ತಾಲ್ಲೂಕಿನ ಹನೂರು ಕ್ಷೇತ್ರದಲ್ಲಿ ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, 2009-10ನೇ ಸಾಲಿನಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಅಥವಾ ಕಸ್ತೂರ ಬಾ ವಸತಿ ಶಾಲೆ ಅಥವಾ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನಾಂಗದವರು ಹೆಚ್ಚಾಗಿ ವಾಸಿಸುವ ಈ ಮತ ಕ್ಷೇತ್ರದಲ್ಲಿ ತೆರೆಯದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, 2010-11ನೇ ಸಾಲಿನಲ್ಲಿ ಈ ಜನಾಂಗದ ಮಕ್ಕಳ ವಿಧ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ವಸತಿ ಶಾಲೆಗಳನ್ನು ತೆರೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) 2009-10ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಹೆಣ್ಣು ಮಕ್ಕಳಿಗಾಗಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯನ್ನು ತೆರೆಯಲಾಗಿದೆ.

ಇ) ಪರಿಶೀಲಿಸಲಾಗುವುದು.